ಈ) ಹಾಗಿದ್ದಲ್ಲಿ ಅದರ ಸಲುವಾಗಿ ಈಎರಡು ಸಂಸ್ಥೆಗಳ ಸೇವೆ ಹೆಚ್ಚಿಸಲು ಸರ್ಕಾರದ ಮುಂದಿರುವ ಯೋಜನೆಗಳಾವುವು. (ವಿವರ ನೀಡುವುದು)

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು) :

ಅ) ಹೌದು.

ಆ) ಎಲ್ಲಾ ಜಿಲ್ಲೆಗಳಲ್ಲಿ ಇರುವಂತೆಯೇ ಕೇಂದ್ರ ಸರ್ಕಾರದ ಪ್ರಾಯೋಜಿತ ಯೋಜನೆಯಡಿಯಲ್ಲಿ ಧಾರವಾಡದ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಮೂಲಕ ಜಿಲ್ಲೆಯ ಪ್ರಾಥಮಿಕ ಸೇವಾ ನಿರತ ತರಬೇತಿಯನ್ನು ನೀಡಲಾಗುತ್ತಿದೆಯೇ ಹೊರತು ಪ್ರತ್ಯೇಕ ಯೋಜನೆಗಳಿಲ್ಲ.

ಇ) ಹೌದು.

ಉ) 'ಅ' ಉತ್ತರದಿಂದಾಗಿ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಧಾರವಾಡದಲ್ಲಿರುವ ಸರ್ಕಾರಿ ಪ್ರಾಥಮಿಕ ಶಾಲೆಗಳು

422 - ಶ್ರೀ ಚಂದ್ರಕಾಂತ ಬೆಲ್ಲದ (ಧಾರವಾಡ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿನ ಧಾರವಾಡದ ಪ್ರತಿಷ್ಠಿತ ಶೈಕ್ಷಣಿಕ ಕೇಂದ್ರವಾಗಿರುವುದು ನಿಜವೇ?

ಆ) ಹಾಗಿದ್ದಲ್ಲಿ, ಧಾರವಾಡದಲ್ಲಿರುವ ಸರ್ಕಾರಿ ಪ್ರಾಥಮಿಕ ಶಾಲೆಗಳೆಷ್ಟು?

ಇ) ಈ ಶಾಲೆಗಳಿಗೆ ಕೊಠಡಿಗಳ ಕೊರತೆ ಏನಾದರೂ ಇದೆಯೇ, ಹಾಗಿದ್ದಲ್ಲಿ ಎಷ್ಟು?

ಈ) ಈ ಶಾಲೆಗಳಿಗೆ ಮಕ್ಕಳಿಗೆ ಆಟವಾಡಲು ಸ್ಥಳಗಳು ಇವೆಯೇ, ಹಾಗಿದ್ದಲ್ಲಿ ಎಷ್ಟು?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು) :

ಅ) ಹೌದು.

ಆ) 43.

ಇ) 26 ಶಾಲೆಗಳಲ್ಲಿ 141 ಕೊಠಡಿಗಳ ಕೊರತೆ ಇದೆ.

ಉ) ಒಟ್ಟು 10 ಶಾಲೆಗಳಲ್ಲಿ ಆಟದ ಮೈದಾನಗಳು ಇವೆ.

ಧಾರವಾಡ ಮತಕ್ಷೇತ್ರದಲ್ಲಿ ಶತಮಾನೋತ್ಸವ ಆಚರಿಸುವ ಪ್ರಾಥಮಿಕ ಶಾಲೆಗಳು.

423 - ಶ್ರೀ ಚಂದ್ರಕಾಂತ ಬೆಲ್ಲದ (ಧಾರವಾಡ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಧಾರವಾಡ ನಗರ ಮತ ಕ್ಷೇತ್ರದಲ್ಲಿರುವ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು ಅವುಗಳನ್ನು ಯಾವಾಗ ಪ್ರಾರಂಭಿಸಲಾಯಿತು (ವಿವರಗಳನ್ನು ನೀಡುವುದು)